# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೇಳನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಸೋಮವಾರ, ದಿನಾಂಕ:19ನೇ ಸೆಪ್ಟೆಂಬರ್, 2022**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

### 02. ವರದಿಯನ್ನೊಪ್ಪಿಸುವುದು

**ಶ್ರೀ ಪಿ. ಹೆಚ್. ಪೂಜಾರ್, (ಅಧ್ಯಕ್ಷರು, ಹಕ್ಕುಬಾಧ್ಯತಾ ಸಮಿತಿ)** ಅವರು ಕರ್ನಾಟಕ ವಿಧಾನ ಪರಿಷತ್ತಿನ ಹಕ್ಕುಬಾಧ್ಯತಾ ಸಮಿತಿಯ 99ನೇ ವರದಿಯನ್ನು ಒಪ್ಪಿಸುವುದು.

### ೦3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.**

01. ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ (ತಿದ್ದುಪಡಿ) ವಿಧೇಯಕ, 2022

02. ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2022

### 04. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01 ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ (ತಿದ್ದುಪಡಿ) ವಿಧೇಯಕ, 2022

**ಶ್ರೀ ಬಸವರಾಜ ಬೊಮ್ಮಾಯಿ ( ಮಾನ್ಯ ಮುಖ್ಯಮಂತ್ರಿಗಳು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

..2

02 ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2022
**ಶ್ರೀ ಆರ್.ಅಶೋಕ್ (ಮಾನ್ಯ ಕಂದಾಯ ಸಚಿವರು)** ಅವರು:–

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರು ಅಣ್ಣೆಪುರ ಗ್ರಾಮದ ಸರ್ವೆ ನಂ.18ರ ವಾರ್ಡ್ ನಂ.143 ರಲ್ಲಿ ಹಾಪ್ ಕಾಮ್ಸ್ ಸಂಸ್ಥೆಯವರು 2.08 ಎಕರೆ ಜಮೀನನ್ನು ಆಕ್ರಮಿಸಿಕೊಂಡಿರುವ ಕುರಿತು ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

02. **ಶ್ರೀ ಸಲೀಂ ಅಹಮದ್** ಅವರು ಪ್ರಮುಖ ಖಾಯಿಲೆಗಳಿಗೆ ಅಗತ್ಯವಾಗಿ ಬೇಕಾಗಿರುವ ಔಷಧಿಗಳು ಜನೌಷಧ ಕೇಂದ್ರಗಳಲ್ಲಿ ಲಭ್ಯವಿಲ್ಲದಿರುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

03. **ಶ್ರೀ ಸಿ.ಎನ್. ಮಂಜೇಗೌಡ** ಅವರು ವೈದ್ಯಕೀಯ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಸ್ವಾಯತ್ತ ಸಂಸ್ಥೆಗಳ ಖಾಯಂ ನೌಕರರಿಗೆ ಆರೋಗ್ಯ ಸಂಜೀವಿನಿ ಯೋಜನೆಯನ್ನು ಜಾರಿಗೊಳಿಸುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

04. **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರು ಚಿಂತಾಮಣಿ ತಾಲ್ಲೂಕು ಕಸಬಾ ಹೋಬಳಿ ಮುನಗನಹಳ್ಳಿಯ ಸರ್ವೆ ನಂ.36/2ರ ಕೆರೆ–ಕಟ್ಟೆ ಮೊದಲಾದ ಜಲಕಾಯಗಳಲ್ಲಿನ ಹಾಗೂ ನಿರ್ಭಂಧಿತ ಪ್ರದೇಶದಲ್ಲಿನ ಅಕ್ರಮ ಕಟ್ಟಡ/ಸಂರಚನೆಗಳನ್ನು ತೆರವುಗೊಳಿಸುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

05. **ಶ್ರೀ ಪುಟ್ಟಣ್ಣ** ಅವರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ಕೆಂಪೇಗೌಡ ಬಡಾವಣೆ ನಿರ್ಮಾಣ ಹಾಗೂ ಪೆರಿಫೆರಲ್ ರಸ್ತೆ ನಿರ್ಮಾಣಕ್ಕಾಗಿ ಸ್ವಾಧೀನ ಪಡಿಸಿಕೊಂಡಿರುವ ರೈತರ ಜಮೀನುಗಳನ್ನು ಅನ್ಯ ಉದ್ದೇಶಗಳಿಗೆ ಬಳಸಿಕೊಳ್ಳುತ್ತಿರುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

01. **ಶ್ರೀ ಮರಿತಿಬ್ಬೇಗೌಡ** ಅವರು ಚಿಕ್ಕಬಳ್ಳಾಪುರ ಜಿಲ್ಲೆ, ಚಿಂತಾಮಣಿ ತಾಲ್ಲೂಕು, ಕೋಟಗಲ್ ಗ್ರಾಮದ ಸರ್ವೆ ನಂ.11ರಲ್ಲಿ ಜಿ.ಟಿ.ಬಿ. ಕ್ರಷರ್ಸ್, ಇವರು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳೊಂದಿಗೆ ಶಾಮೀಲಾಗಿ ಕಾನೂನು ಬಾಹಿರವಾಗಿ ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿಕೊಂಡಿರುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಪಿ.ಆರ್ ರಮೇಶ್** ಅವರು ಕುಣಿಗಲ್ ತಾಲ್ಲೂಕಿನ ವೈ. ಹೊಸಹಳ್ಳಿಯಿಂದ ಹಂಪಾಪುರ ಮಧ್ಯೆ ಸುಮಾರು 600 ಮೀಟರ್ ಉದ್ದದ ಸಂಪರ್ಕ ಸೇತುವೆಯನ್ನು ನಿರ್ಮಾಣ ಮಾಡುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ಡಿ.ಎಸ್. ಅರುಣ್** ಅವರು ಶಿವಮೊಗ್ಗ ಜಿಲ್ಲೆಯಲ್ಲಿ ಉತ್ಪಾದನೆಯಾಗುವ ಅಡಿಕೆ ಮಾರಾಟದ ಒಟ್ಟು ವಹಿವಾಟಿನ ತೆರಿಗೆ ಆದಾಯದ ಬಗ್ಗೆ ಗೊಂದಲವಿರುವ ಕುರಿತು ಪ್ರಸ್ತಾಪಿಸುವುದು.

೦4. **ಶ್ರೀ ಎಂ.ನಾಗರಾಜು ಹಾಗೂ ಶ್ರೀ ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು** ಅವರುಗಳು ದಿನಗೂಲಿ ಕಾರ್ಮಿಕರ ಆತ್ಮಹತ್ಯೆಗಳನ್ನು ತಡೆಗಟ್ಟಲು ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸುವುದು.

## 07. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲಿನ ಮುಂದುವರೆದ ಚರ್ಚೆ

| | |
|---|---|
| **ಶ್ರೀಯುತರುಗಳಾದ;–**<br>ಬಿ.ಕೆ.ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು, ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಸಲೀಂ ಅಹಮದ್, ಕೆ.ಎ.ತಿಪ್ಪೇಸ್ವಾಮಿ, ಶರವಣ ಟಿ.ಎ. ಮತ್ತು ಬಿ.ಎಂ. ಫಾರೂಖ್ ಹಾಗೂ ಇತರರುಗಳು | ರಾಜ್ಯದಲ್ಲಿ ಇತ್ತೀಚೆಗೆ ಸುರಿಯುತ್ತಿರುವ ಮಳೆಯಿಂದಾಗಿ ಬೆಂಗಳೂರು ನಗರ ಸೇರಿದಂತೆ ರಾಜ್ಯದ ಬಹುತೇಕ ಜಿಲ್ಲೆಗಳು ಪ್ರವಾಹ ಭೀತಿಯನ್ನು ಎದುರಿಸುತ್ತಿದ್ದು, ರಾಜ್ಯದ ಹೆದ್ದಾರಿ ಮತ್ತು ರಸ್ತೆಗಳು ಕೊಚ್ಚಿಹೋಗಿದ್ದು, ಕೆರೆ ಕೋಡಿಗಳು ಒಡೆದು ಅಪಾರ ಹಾನಿಯುಂಟಾಗಿ ಜನರು ಸಂಕಷ್ಟಕ್ಕೆ ಒಳಗಾಗಿರುವ ಕುರಿತು.<br><br>ಮೂರನೇ ದಿನ |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**